# ಕರ್ನಾಟಕ ವಿಧಾನ ಪರಿಷತ್ತು

**ವಿಷಯ:-** ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿರವರು ನಿಯಮ 72ರಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ.

*****

**ಸೂಚನೆ: ಗ್ರಾಮಗಳಲ್ಲಿನ ವ್ಯಾಜ್ಯಗಳನ್ನು ಸ್ಥಳೀಯವಾಗಿ ಪರಿಹರಿಸುವುದು ಹಾಗೂ ನ್ಯಾಯಕ್ಕಾಗಿ ಹಳ್ಳಿಗಾಡಿನ ಬಡಜನರು ಪಟ್ಟಣಕ್ಕೆ ಅಲೆದಾಡುವುದನ್ನು ತಪ್ಪಿಸಲು ರಾಷ್ಟ್ರೀಯ ಕಾನೂನು ಆಯೋಗದ ಶಿಫಾರಸ್ಸಿನಂತೆ ರಾಜ್ಯದಲ್ಲಿ ಗ್ರಾಮ ನ್ಯಾಯಾಲಯಗಳನ್ನು ತ್ವರಿತವಾಗಿ ಸ್ಥಾಪಿಸುವ ಕುರಿತು ಮಾನ್ಯ ಕಾನೂನು ಸಚಿವರ ಗಮನ ಸೆಳೆಯುವುದು.**

**ಉತ್ತರ:** ಗ್ರಾಮ ನ್ಯಾಯಾಲಯ ಅಧಿನಿಯಮ, 2008 ರನ್ವಯ ಕರ್ನಾಟಕ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ನ್ಯಾಯಾಲಯಗಳನ್ನು ಸ್ಥಾಪಿಸಬಹುದಾಗಿದೆ. ಸದರಿ ಅಧಿನಿಯಮದನ್ವಯ, ರಾಜ್ಯ ಸರ್ಕಾರವು, ಉಚ್ಚ ನ್ಯಾಯಾಲಯದೊಂದಿಗೆ ಸಮಾಲೋಚಿಸಿದ ನಂತರ, ಪ್ರತಿಯೊಂದು ಜಿಲ್ಲೆಯಲ್ಲಿ ಪಂಚಾಯಿತಿಯ ಮಧ್ಯವರ್ತಿ ಮಟ್ಟದಲ್ಲಿ ಒಂದು ಅಥವಾ ಹೆಚ್ಚಿನ ಗ್ರಾಮ ನ್ಯಾಯಾಲಯಗಳನ್ನು ಅಧಿಸೂಚನೆಯ ಮೂಲಕ ಸ್ಥಾಪಿಸಬಹುದಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ 27 ಎಲ್‌ಸಿಇ 2009, ದಿನಾಂಕ: 25.9.2010ರಲ್ಲಿ ರಾಜ್ಯದಲ್ಲಿ ಈಗಾಗಲೇ ಚಿಕ್ಕಬಳ್ಳಾಪುರ ಮತ್ತು ಗೌರಿಬಿದನೂರು ಜಿಲ್ಲೆಗಳಲ್ಲಿ ತಲಾ ಒಂದು ಗ್ರಾಮ ನ್ಯಾಯಾಲಯ (ಒಟ್ಟು 02) ವನ್ನು ಸ್ಥಾಪಿಸಲು ಮಂಜೂರಾತಿ ನೀಡಲಾಗಿದೆ ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಲಾ 27 ಎಲ್‌ಸಿಇ 2010, ದಿನಾಂಕ: 11.3.2011ರಲ್ಲಿ ಮೇಲ್ಕಂಡ ಎರಡೂ ಗ್ರಾಮ ನ್ಯಾಯಾಲಯಗಳಿಗೆ ತಲಾ ಒಬ್ಬರು ಪ್ರಿಸೈಡಿಂಗ್ ಅಧಿಕಾರಿಗಳನ್ನು ಹಾಗೂ ಅವರಿಗೆ ಪೂರಕವಾಗಿ 17 ಸಿಬ್ಬಂದಿಯನ್ನು ಸೃಜಿಸಲು ಮಂಜೂರಾತಿ ನೀಡಲಾಗಿದೆ. ಪ್ರಸ್ತುತ ಈ ಎರಡು ಗ್ರಾಮ ನ್ಯಾಯಾಲಯಗಳು ಕಾರ್ಯ ನಿರ್ವಹಿಸುತ್ತಿವೆ.

ಪ್ರಸ್ತುತ ರಾಜ್ಯ ಸರ್ಕಾರವು ಅಧಿಕಾರಕ್ಕೆ ಬಂದ ಮೇಲೆ ಕಳೆದ 14 ವರ್ಷಗಳಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿ ನೆನೆಗುದಿಗೆ ಬಿದ್ದಿದ್ದ ಗ್ರಾಮ ನ್ಯಾಯಾಲಯದ ಸ್ಥಾಪನೆಯ ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಿ ಗ್ರಾಮ ನ್ಯಾಯಾಲಯಗಳ ಸ್ಥಾಪನೆಗೆ ಕ್ರಮ ವಹಿಸಿದ್ದು, ಮೊದಲ ಹಂತದಲ್ಲಿ 100 ಗ್ರಾಮ ನ್ಯಾಯಾಲಯಗಳ ಸ್ಥಾಪನೆಗೆ ತಾತ್ವಿಕ ನಿರ್ಣಯ ಕೈಗೊಂಡಿದೆ. ಈ ಗ್ರಾಮ ನ್ಯಾಯಾಲಯಗಳ ಸ್ಥಾಪನೆಯ ಪ್ರಕ್ರಿಯೆಯ ಭಾಗವಾಗಿ ಆವರ್ತಕ ಮತ್ತು ಅನಾವರ್ತಕ ವೆಚ್ಚಗಳನ್ನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಪಡೆಯಲು ಕ್ರಮವಹಿಸಲಾಗಿದೆ.

(ಎಚ್.ಕೆ ಪಾಟೀಲ)
ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು
ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ
ಸಚಿವರು